ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ	1361
ಸದಸ್ಯರ ಹೆಸರು	ಶ್ರೀ ವಿಜಯ್ ಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	24.12.2021

ಕ್ರಸಂ	ಪ್ರಶ್ನೆಗಳು	ಉತ್ತರ
ಅ.	ಬೀದರ್ ಜಿಲ್ಲೆ ಬಸವ ಕಲ್ಯಾಣ ಹಾಗೂ ಹುಲಸೂರು ತಾಲ್ಲೂಕಿನ ಗ್ರಾಮಗಳಲ್ಲಿ ರಸ್ತೆ ಮತ್ತು ಕುಡಿಯುವ ನೀರಿನ ಸೌಲಭ್ಯದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು;	ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ. • 2018-19ನೇ ಸಾಲಿನಲ್ಲಿ 3054 ಲಮ್‌ಸಮ್ ಯೋಜನೆಯಡಿ ಒಟ್ಟು 10 ಕಾಮಗಾರಿಗಳು ಮತ್ತು 5054 ಯೋಜನೆಯಡಿ 13 ಕಾಮಗಾರಿಗಳು ಬಸವಕಲ್ಯಾಣ ಹಾಗೂ ಹುಲಸೂರ ತಾಲ್ಲೂಕಿನ ಗ್ರಾಮೀಣ ರಸ್ತೆಗಳ ಅಭಿವೃದ್ಧಿಗಾಗಿ ಕಾಮಗಾರಿಗಳನ್ನು ಕೈಗೊಳ್ಳಲಾಗುತ್ತಿದೆ. ಕಾಮಗಾರಿವಾರು ವಿವರಗಳನ್ನು **ಅನುಬಂಧ 1 & 2 ರಲ್ಲಿ** ನೀಡಿದೆ. • 2021-22 ನೇ ಸಾಲಿನ ಲೆ.ಶೀ. 5054 ರಡಿ ಮುಖ್ಯಮಂತ್ರಿಗಳ ವಿಶೇಷ ಮಂಜೂರಾತಿ ಕಾರ್ಯಕ್ರಮದಡಿ ಬಸವಕಲ್ಯಾಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ರೂ. 25.00 ಕೋಟಿಗಳ ಮೊತ್ತದಲ್ಲಿ ಗ್ರಾಮೀಣ ರಸ್ತೆ ಕಾಮಗಾರಿಗಳನ್ನು ಅಭಿವೃದ್ಧಿಪಡಿಸಲು ಅನುಮೋದನೆ ನೀಡಿದೆ. ವಿವರಗಳನ್ನು **ಅನುಬಂಧ-3 ರಲ್ಲಿ** ಲಗತ್ತಿಸಿದೆ. • ಕುಡಿಯುವ ನೀರಿನ ಸೌಲಭ್ಯಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲೆಯ ಬಸವಕಲ್ಯಾಣ ಹಾಗೂ ಹುಲಸೂರು ತಾಲ್ಲೂಕಿನ ಜನವಸತಿಗಳಿಗೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವಿವಿಧ ಲೆಕ್ಕ ಶೀರ್ಷಿಕೆಗಳಡಿ ಕಾಮಗಾರಿಗಳನ್ನು ನಿರ್ವಹಿಸಿ ಕುಡಿಯುವ ನೀರನ್ನು ಒದಗಿಸಲಾಗುತ್ತಿದೆ.

ಆ.	ರಸ್ತೆ ಅಭಿವೃದ್ಧಿ ಹಾಗೂ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸಲು ಕಳೆದ ಎರಡು ವರ್ಷಗಳಲ್ಲಿ ನೀಡಿರುವ ಅನುದಾನ ಎಷ್ಟು?	ಬಸವಕಲ್ಯಾಣ ತಾಲ್ಲೂಕಿಗೆ ರಸ್ತೆ ಅಭಿವೃದ್ಧಿ ಮತ್ತು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಯೋಜನೆಯಡಿ ಪ್ರಸಕ್ತ ಸಾಲಿನೊಂದಿಗೆ ಕಳೆದ ಎರಡು ವರ್ಷಗಳಲ್ಲಿ ಕೆಳಕಂಡಂತೆ ಅನುದಾನವನ್ನು ಒದಗಿಸಲಾಗಿರುತ್ತದೆ.

ರಸ್ತೆ ಅಭಿವೃದ್ಧಿ		
ಕ್ರ. ಸಂ.	**ವರ್ಷ**	**ಮೊತ್ತ (ರೂ. ಲಕ್ಷಗಳಲ್ಲಿ)**
01	2019-20	63.00
02	2020-21	53.34
02	2021-22	2500.00
ಒಟ್ಟು		**2616.34**
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ		
01	2019-20	1847.05
02	2020-21	6787.26
03	2021-22	5630.80
ಒಟ್ಟು		**14265.11**

ಸಂಖ್ಯೆ: ಗ್ರಾಅಪ:15ನೇವಿಸ:136:ಆರ್.ಆರ್.ಸಿ:2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು